# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **983**

ಸದಸ್ಯರ ಹೆಸರು : ಶ್ರೀ ಶಿವಣ್ಣ ಬಿ.ಎಸ್.
(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರು)

ಉತ್ತರಿಸುವ ದಿನಾಂಕ : 25-08-2026

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತಾಂತ್ರಿಕ ಕಾರಣಗಳಿಂದಾಗಿ ರಾಜ್ಯದ 6 ಲಕ್ಷಕ್ಕೂ ಅಧಿಕ ರೈತರು 'ಪಿಎಂ ಕಿಸಾನ್ ಸಮ್ಮಾನ್' ಯೋಜನೆಯ ಕಂತಿನ ಹಣದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯಡಿ ಅರ್ಹ ರೈತರು ತಾಂತ್ರಿಕ ಕಡ್ಡಾಯ ಪ್ರಕ್ರಿಯೆಗಳಾದ ಇ-ಕೆವೈಸಿ ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಸುವುದು ಅವಶ್ಯಕವಾಗಿರುತ್ತದೆ. ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಈ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗಿದ್ದು, ಇಲ್ಲಿಯವರೆಗೆ ರಾಜ್ಯದಲ್ಲಿ 43.30 ಲಕ್ಷ ಫಲಾನುಭವಿಗಳು ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಿರುತ್ತಾರೆ. ರಾಜ್ಯದ 3,71,394 ಫಲಾನುಭವಿಗಳು ಹಾಗೂ 2,25,691 ಫಲಾನುಭವಿಗಳು ಕ್ರಮವಾಗಿ ಇ-ಕೆವೈಸಿ ಮತ್ತು ಆಧಾರ್ ಜೋಡಣೆ ಮಾಡಿಸಲು ಬಾಕಿಯಿರುತ್ತದೆ. ಈ ಫಲಾನುಭವಿಗಳಿಗೆ ಆರ್ಥಿಕ ನೆರವು ವರ್ಗಾವಣೆಯಾಗಿರುವುದಿಲ್ಲ. ಈ ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಇವರಿಗೆ ಬಾಕಿಯಿರುವ ಆರ್ಥಿಕ ನೆರವಿನ ಕಂತುಗಳು ಕೇಂದ್ರ ಸರ್ಕಾರದಿಂದ ವರ್ಗಾಯಿಸಲಾಗುತ್ತದೆ ಹಾಗೂ, ಯೋಜನೆಯ ಪರಿಷ್ಕೃತ ನಿಯಮದಡಿ ಪ್ರತಿ ವರ್ಷ ಎಲ್ಲಾ ಫಲಾನುಭವಿಗಳು ಇ-ಕೆವೈಸಿ ಮಾಡಿಸುವುದು ಕಡ್ಡಾಯಗೊಳಿಸಲಾಗಿದೆ. |
| ಆ) | ಇ-ಕೆವೈಸಿ ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಆಗದಿರುವುದರಿಂದ ಅನುದಾನ ತಡೆಯಾಗಿದ್ದು, ರೈತರಲ್ಲಿ ಜಾಗೃತಿ ಮೂಡಿಸಲು ಕೃಷಿ ಇಲಾಖೆ ಕೈಗೊಂಡಿರುವ ಕ್ರಮಗಳೇನು; | ಕೃಷಿ ಇಲಾಖೆಯಿಂದ ಪಿ.ಎಂ.ಕಿಸಾನ್ ಫಲಾನುಭವಿ ರೈತರುಗಳಿಗೆ ಇ-ಕೆವೈಸಿ ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡಿಸಲು ಜಾಗೃತಿ ಮೂಡಿಸುವ ಸಲುವಾಗಿ ದಿನಪತ್ರಿಕೆಗಳಲ್ಲಿ ಜಾಹಿರಾತುಗಳನ್ನು ನೀಡಲಾಗುತ್ತಿದೆ. ರೈತರುಗಳಿಗೆ ಮೊಬೈಲ್ SMS ಸಂದೇಶಗಳನ್ನು ಕಳುಹಿಸಲಾಗುತ್ತಿದೆ. ಕ್ಷೇತ್ರ ಮಟ್ಟದಲ್ಲಿ ರೈತರುಗಳಿಗೆ ಗ್ರೂಪ್ ಕಾಲ್ ಮೂಲಕ |

| | | |
|---|---|---|
| | | ಮಾಹಿತಿ ನೀಡಲಾಗುತ್ತಿದೆ. ರೈತರು ಇ-ಕೆವೈಸಿ ಮಾಡಿಸಲು ಗ್ರಾಮ ಮಟ್ಟದಲ್ಲಿ ಗ್ರಾಮ ನೋಡಲ್ ಅಧಿಕಾರಿಗಳನ್ನು ಗುರುತಿಸಿ ಅವರಿಗೆ ಲಾಗಿನ್ ಗಳನ್ನು ಸೃಜಿಸಿಕೊಡಲಾಗಿದೆ. ಸಾರ್ವಜನಿಕ ಸೇವಾ ಕೇಂದ್ರ ಹಾಗೂ ಗ್ರಾಮ ಒನ್ ಕೇಂದ್ರಗಳಿಗೆ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಲು ಲಾಗಿನ್ ಗಳನ್ನು ನೀಡಲಾಗಿದೆ ಹಾಗೂ, ರೈತರು ಪಿ.ಎಂ.ಕಿಸಾನ್ ಮೊಬೈಲ್ - ಅಪ್ಲಿಕೇಷನ್ ಮೂಲಕ ಸ್ವಯಂ ಇ-ಕೆವೈಸಿ ಪ್ರಕ್ರಿಯೆ ಕೈಗೊಳ್ಳಬಹುದಾಗಿದ್ದು, ಈ ಬಗ್ಗೆ ಕೃಷಿ ಇಲಾಖೆಯಿಂದ ಜಾಗೃತಿ ಮೂಡಿಸಲಾಗುತ್ತಿದೆ.<br>ರೈತರ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಸಲು ಬ್ಯಾಂಕ್‌ಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಈ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುತ್ತಿದೆ. ಅಂಚೆ ಇಲಾಖೆಯ ಇಂಡಿಯನ್ ಪೋಸ್ಟಲ್ ಪೇಮೆಂಟ್ ಬ್ಯಾಂಕ್ (IPPB)ಗಳೊಂದಿಗೆ ಇಂತಹ ರೈತರಿಗೆ ಹೊಸದಾಗಿ ಆಧಾರ್ ಜೋಡಿತ ಬ್ಯಾಂಕ್ ಖಾತೆ ತೆರೆಯಲು ಕ್ರಮವಹಿಸಲು ಸಹಕಾರ ನೀಡಲಾಗುತ್ತಿದೆ. |
| ಇ) | ರಾಜ್ಯದಲ್ಲಿಯೇ ಅತ್ಯಧಿಕವಾಗಿ ಬೆಳಗಾವಿ ಹಾಗೂ ತುಮಕೂರು ಜಿಲ್ಲೆಗಳಲ್ಲಿ ರೈತರು ಹಣದಿಂದ ವಂಚಿತರಾಗಿದ್ದು, ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿ ನಿಗದಿಪಡಿಸಿದೆಯೇ; | ಪಿ.ಎಂ.ಕಿಸಾನ್ ಯೋಜನೆಯಡಿ ಬೆಳಗಾವಿ ಜಿಲ್ಲೆಯ 20,444 ರೈತರು ಮತ್ತು ತುಮಕೂರು ಜಿಲ್ಲೆಯ 24,992 ರೈತರು ಇ-ಕೆವೈಸಿ ಮಾಡಿಸುವುದು ಬಾಕಿಯಿರುತ್ತದೆ ಹಾಗೂ ಬೆಳಗಾವಿ ಜಿಲ್ಲೆಯ 18,479 ರೈತರು ಮತ್ತು ತುಮಕೂರು ಜಿಲ್ಲೆಯ 15,701 ರೈತರು ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಸುವುದು ಬಾಕಿಯಿರುತ್ತದೆ. ಈ ಯೋಜನೆಯಡಿ ಕೇಂದ್ರ ಸರ್ಕಾರವು ಈ ಪ್ರಕ್ರಿಯೆಗಳಿಗೆ ಕಾಲಮಿತಿ ನಿಗದಿಪಡಿಸಿರುವುದಿಲ್ಲ. ರೈತರು ಸ್ವಯಂ ಇ-ಕೆವೈಸಿ ಮತ್ತು ಅವರ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಬೇಕಾಗಿರುತ್ತದೆ. ಅವರು ಈ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದ ದಿನಾಂಕದಿಂದ ಯೋಜನೆಯ ಆರ್ಥಿಕ ನೆರವು (ಬಾಕಿಯಿರುವ ಕಂತುಗಳು ಸೇರಿದಂತೆ) ಪಡೆಯಲು ಅರ್ಹರಾಗಿರುತ್ತಾರೆ. |
| ಈ) | ವಂಚಿತರಾಗಿರುವ ರೈತರ ಬ್ಯಾಂಕ್ ಖಾತೆಗಳಿಗೆ ತಕ್ಷಣವೇ ಹಣ ಜಮೆಯಾಗಲು ತಾಲ್ಲೂಕು | ಪಿ.ಎಂ.ಕಿಸಾನ್ ಯೋಜನೆಯು ಶೇಕಡ 100 ರಷ್ಟು ಕೇಂದ್ರ ವಲಯ ಯೋಜನೆಯಾಗಿದ್ದು, ಪ್ರತಿ ನಾಲ್ಕು ತಿಂಗಳಿಗೊಮ್ಮೆ ಆರ್ಥಿಕ ನೆರವನ್ನು |

| | | |
|---|---|---|
| | ಮತ್ತು ಗ್ರಾಮ ಮಟ್ಟದಲ್ಲಿ ಹಮ್ಮಿಕೊಂಡಿರುವ ವಿಶೇಷ ಅಭಿಯಾನಗಳಾವುವು? (ವಿವರ ನೀಡುವುದು) | ಅರ್ಹ ಫಲಾನುಭವಿಗಳಿಗೆ 'ನೇರ ನಗದು ವರ್ಗಾವಣೆ (DBT)' ಮೂಲಕ ಆಧಾರ ಜೋಡಿತ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗುತ್ತದೆ. ಈ ಆರ್ಥಿಕ ನೆರವು ವರ್ಗಾವಣೆ ಪ್ರಕ್ರಿಯೆಯು ಕೇಂದ್ರ ಸರ್ಕಾರದ ನಿಯಮಾವಳಿ ಹಾಗೂ ನಿರ್ಧಾರಗಳಿಗೆ ಒಳಪಟ್ಟಿರುತ್ತದೆ. ರಾಜ್ಯ ಸರ್ಕಾರದಿಂದ ಅರ್ಹ ಫಲಾನುಭವಿಗಳು ಇ-ಕೆವೈಸಿ, ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಸಲು ಜಾಗೃತಿ ಮೂಡಿಸುವ ಕಾರ್ಯಗಳನ್ನು, ಅಭಿಯಾನ ರೂಪದಲ್ಲಿ ಕೈಗೊಳ್ಳಲಾಗುತ್ತಿದೆ. ಗ್ರಾಮ ಪಂಚಾಯತಿಗಳಲ್ಲಿ, ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಪಿ.ಎಂ.ಕಿಸಾನ್ ಯೋಜನೆ ಸಂಬಂಧ ಇ-ಕೆವೈಸಿ ಕುರಿತಾಗಿ ಜಾಗೃತಿ ಮೂಡಿಸಲಾಗುತ್ತಿದೆ ಮತ್ತು ನಾಗರೀಕ ಸೇವಾ ಕೇಂದ್ರ (CSC) ಗಳ ಸಹಯೋಗದೊಂದಿಗೆ ಕ್ಯಾಂಪ್ ಗಳನ್ನು ಆಯೋಜಿಸಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. ಗ್ರಾಮ ದಲ್ಲಿನ ಕೃಷಿ ಸಖಿ, ಪಶು ಸಖಿ ಕಾರ್ಯಕರ್ತೆಯರ ಸೇವೆಯನ್ನು ಪಿ.ಎಂ.ಕಿಸಾನ್ ಯೋಜನೆಯಡಿಯಲ್ಲಿನ ಈ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಬಳಸಿಕೊಳ್ಳಲಾಗುತ್ತಿದೆ. ಹೆಚ್ಚು ಹೆಚ್ಚು ಫಲಾನುಭವಿಗಳನ್ನು ತಲುಪುವ ನಿಟ್ಟಿನಲ್ಲಿ ದಿನಪತ್ರಿಕೆಗಳಲ್ಲಿ ಜಾಹಿರಾತು, ರೈತರಿಗೆ ಗ್ರೂಪ್ ಕಾಲ್, SMS ಸಂದೇಶಗಳನ್ನು ಕಳುಹಿಸಲಾಗುತ್ತಿದೆ. ಹಾಗೆಯೇ, ಅಂಚೆ ಕಚೇರಿ ಯಲ್ಲಿನ ' ಇಂಡಿಯನ್ ಪೋಸ್ಟ್ ಪೇಮೆಂಟ್ ಬ್ಯಾಂಕ್' (IPPB) ರವರ ಗ್ರಾಮ ಮಟ್ಟದ ಪ್ರತಿನಿಧಿಗಳಿಂದ ಫಲಾನುಭವಿಗಳಿಗೆ ಅವರ ಗ್ರಾಮದಲ್ಲಿಯೇ ಆಧಾರ್ ಜೋಡಿತ ಬ್ಯಾಂಕ್ ಖಾತೆ ತೆರೆಯಲು ಕ್ರಮವಹಿಸಲಾಗುತ್ತಿದೆ. |

*ಕಡತ ಸಂಖ್ಯೆ: ಕೃಇ 217 ಎಎಂಎಸ್ 2026*

P. M. Narendraswamy

(ಪಿ.ಎಂ.ನರೇಂದ್ರಸ್ವಾಮಿ)
ಕೃಷಿ ಸಚಿವರು